ದಿ. 14.06.2006 ರಲ್ಲಿ ಕರ್ನಾಟಕ ಗ್ರಾಮಪಂಚಾಯಿತಿಗಳು (ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳು) (ಮಾದರಿ) ಉಪವಿಧಿಗಳು, 2006ರ ಪ್ರಕಾರ ಬೈಲಾಗಳನ್ನು ರಚಿಸಿದೆ.

ಆ) ಪಂಚಾಯತ್ ರಾಜ್ ಕಾಯ್ದೆ ಪ್ರಕಾರ ಪ್ರಾಥಮಿಕ ಶಿಕ್ಷಣವು ಗ್ರಾಮ ಪಂಚಾಯಿತಿಯ ವ್ಯಾಪ್ತಿಯಲ್ಲಿ ಬರುವುದರಿಂದ ಮತ್ತು ಶಾಲಾಭಿವೃದ್ಧಿ ಮೇಲುಸ್ತುವಾರಿ ಸಮಿತಿಗಳಿಗೂ ಪಂಚಾಯತ್ ರಾಜ್ ವ್ಯವಸ್ಥೆಗೂ ಜೊತೆಗೂಡಿಸುವ ಸಲುವಾಗಿ ಮತ್ತು ಶಾಲಾ ಆಡಳಿತದಲ್ಲಿ ಸಮುದಾಯದ ಸಕ್ರಿಯ ಪಾತ್ರ ಖಚಿತಪಡಿಸಿಕೊಳ್ಳಲು ಹೆಚ್ಚಿನ ಅನುಕೂಲವಾಗುವಂತೆ ಎಸ್.ಡಿ.ಎಂ.ಸಿ. ಗಳನ್ನು ಗ್ರಾಮಪಂಚಾಯತಿ ವ್ಯಾಪ್ತಿಗೆ ಅಳವಡಿಸಿ ನಿಯಮಾವಳಿಗಳನ್ನು ಬದಲಾವಣೆ ಮಾಡಲಾಗಿದೆ.

ಇ) ಗೊಂದಲಗಳು ಉಂಟಾಗಿಲ್ಲ ಆದರೆ ನ್ಯಾಯಾಲಯದಲ್ಲಿ ಹಲವು ಪ್ರಕರಣಗಳು ದಾಖಲಾಗಿದ್ದವು. ಉಚ್ಚ ನ್ಯಾಯಾಲಯವು ದಿ. 19.12.2006 ರಂದು ಸರ್ಕಾರದ ಕರ್ನಾಟಕ ಗ್ರಾಮಪಂಚಾಯಿತಿಗಳು (ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಗಳು) (ಮಾದರಿ) ಉಪವಿಧಿಗಳು, 2006ರ ಬೈಲಾ ಅಧಿಸೂಚನೆಯನ್ನು ಎತ್ತಿಹಿಡಿದು ತೀರ್ಪು ನೀಡಿದೆ.

ಈ) ಈ ಬದಲಾವಣೆಯಿಂದ ಶಿಕ್ಷಕರ ನೆಮ್ಮದಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಉ) ಹಿಂದೆ ಇದ್ದ ನಿಯಮಗಳನ್ನು ಪುನಃ ಜಾರಿಗೆ ತರುವ ಪ್ರಸ್ತಾಪ ಸರ್ಕಾರದ ಮುಂದೆ ಇರುವುದಿಲ್ಲ. ಹೊಸ ನಿಯಮಗಳ ಬಗ್ಗೆ ರಾಜ್ಯ ಉಚ್ಚ ನ್ಯಾಯಾಲಯವು ದಿ. 19.12.2006 ರಂದು ಆದೇಶ ನೀಡಿದ್ದು, ಸದರಿ ಆದೇಶದನ್ವಯ ಕ್ರಮವಹಿಸಲು ಸೂಚನೆಗಳನ್ನು ನೀಡಲಾಗುತ್ತಿದೆ.

61 (109) ಶ್ರೀ ವಿ. ಸುನೀಲ್‌ಕುಮಾರ್ (ಕಾರ್ಕಳ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಮಂಗಳೂರು ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಇರುವ ಸ್ನಾತಕೋತ್ತರ ಕೇಂದ್ರಗಳು ಯಾವುವು ;

ಆ) ಉಡುಪಿ ಜಿಲ್ಲೆ, ಕಾರ್ಕಳ ತಾಲ್ಲೂಕು ಕೇಂದ್ರದಲ್ಲಿ ಸ್ನಾತಕೋತ್ತರ ಕೇಂದ್ರಗಳನ್ನು ಸ್ಥಾಪಿಸಲು ಸರ್ಕಾರ ಉದ್ದೇಶಿಸಿದೆಯೇ ;

ಇ) ಆಡಳಿತಾತ್ಮಕ ಮಂಜೂರಾತಿ ಮತ್ತು ಇದಕ್ಕಾಗಿ ಸ್ಥಳವನ್ನು ಸಹ ಗುರುತಿಸಿದ್ದರೂ ಕೇಂದ್ರ ಸ್ಥಾಪನೆಯ ಕಾಮಗಾರಿಗಳನ್ನು ಇನ್ನೂ ಪ್ರಾರಂಭಿಸದಿರಲು ಕಾರಣಗಳೇನು ;

ಈ) ಕೆಲಸ ಪ್ರಾರಂಭಿಸಿ, ಪೂರ್ಣಗೊಳಿಸಲು ಬೇಕಾಗುವ ಸಮಯ ಎಷ್ಟು ; ವಿವರ ನೀಡುವುದು ?

ಶ್ರೀ ಡಿ.ಎಚ್. ಶಂಕರಮೂರ್ತಿ (ಉನ್ನತ ಶಿಕ್ಷಣ ಸಚಿವರು):

ಅ) ಮಂಗಳೂರು ವಿಶ್ವವಿದ್ಯಾನಿಲಯದ ವ್ಯಾಪ್ತಿಯಲ್ಲಿ ಪ್ರಸ್ತುತ ಒಂದು ಸ್ನಾತಕೋತ್ತರ ಕೇಂದ್ರವಿದ್ದು, ಅದು ವಿಶ್ವವಿದ್ಯಾನಿಲಯ ಘಟಕ ಕಾಲೇಜಾದ ಎಫ್.ಎಂ.ಕೆ.ಎಂ.ಸಿ. ಕಾಲೇಜು, ಮಡಿಕೇರಿ ಇದರ ಆವರಣದಲ್ಲಿ ಕಾರ್ಯನಿರ್ವಹಿಸುತ್ತಿದೆ.

ಆ) ಇ) ಮತ್ತು ಈ) ಮಂಗಳೂರು ವಿಶ್ವವಿದ್ಯಾನಿಲಯವು ಉಡುಪಿ ಜಿಲ್ಲೆ, ಕಾರ್ಕಳ ತಾಲ್ಲೂಕಿನಲ್ಲಿ ಒಂದು ಸ್ನಾತಕೋತ್ತರ ಕೇಂದ್ರ ಪ್ರಾರಂಭಿಸಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದಿತು. ಆದರೆ, ಈ ಕೇಂದ್ರದ ಸ್ಥಾಪನೆಗೆ ತಗಲುವ ಖರ್ಚು- ವೆಚ್ಚಗಳನ್ನು ಯಾವ ಮೂಲದಿಂದ ಭರಿಸಬೇಕು ಎಂಬ ಬಗ್ಗೆ ನಿರ್ದಿಷ್ಟ ನಿಲುವನ್ನು ಮಂಗಳೂರು ವಿಶ್ವವಿದ್ಯಾಲಯವು ತೆಗೆದುಕೊಳ್ಳದಿರುವ ಕಾರಣ ಈ ಬಗ್ಗೆ ಯಾವುದೇ ಅಂತಿಮ ನಿರ್ಧಾರ ತೆಗೆದುಕೊಂಡಿರುವುದಿಲ್ಲ. ಆದಾಗ್ಯೂ ಈ ಕೇಂದ್ರದ ಸ್ಥಾಪನೆಗೆ ತಗಲುವ ಖರ್ಚು-ವೆಚ್ಚಗಳನ್ನು ಯಾವ ಮೂಲದಿಂದ ಭರಿಸಬೇಕು ಎಂಬ ಬಗ್ಗೆ ವರದಿಯನ್ನು ವಿಶ್ವವಿದ್ಯಾಲಯದಿಂದ ನಿರೀಕ್ಷಿಸಲಾಗಿದ್ದು, ವರದಿ ಸ್ವೀಕರಿಸಿದ ನಂತರ ಈ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದು.

104 (437) ಶ್ರೀ ಚನ್ನಬಸರಾಜ್ (ಅಪ್ಪಾಜಿ) :

ಶ್ರೀ ಶಂಕರರಾವ್ ನಾಡಗೌಡ (ಮುದ್ದೇಬಿಹಾಳ) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ;

ಅ) ರಾಜ್ಯದಲ್ಲಿ ಪಡಿತರ ಚೀಟಿ ವಿತರಣೆಯಲ್ಲಿ ಹಲವಾರು ನ್ಯೂನತೆಗಳು ಕಂಡು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಪಡಿತರ ಚೀಟಿಯನ್ನು ಸಮರ್ಪಕವಾಗಿ ಹಾಗೂ ಅರ್ಹರಿಗೆ ಹಂಚಲು ಸರ್ಕಾರ ಕೈಗೊಂಡ ಕ್ರಮಗಳೇನು ?